**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 29/2023**

**ಚಾ.ಸಾ. :- 04**
**ಪ್ರಾ.ಸಾ. :- 05**

ಹೆಸರು : ಸಾಗರ್

ತಂದೆಯ ಹೆಸರು : ಕುಮಾರ

ವಯಸ್ಸು : 33 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಕಿರಂಗೂರು ಗ್ರಾಮ.

---

**ಪ್ರಮಾಣೀಕರಿಸಲಾದ ದಿನಾಂಕಃ- 02.02.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2(ಸಿ)** ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದಲ್ಲಿ ಮಾಡಿರುತ್ತೇನೆ. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ಚಾ.ಸಾ-1 ರಿಂದ 3 ರವರು ಸ್ನೇಹಿತರು. ಅಪಘಾತವಾದಾಗ ನಾನು ಸ್ಥಳದಲ್ಲಿದ್ದೆ. ನಾನು ಪೊಲೀಸರಿಗೆ ದೂರು ಕೊಡಲು ಪ್ರಯತ್ನಿಸಿಲ್ಲ. ನಿಪಿ-3 ರಲ್ಲಿ ನನ್ನ ಭಾವಚಿತ್ರ ಇದೆ. ವಾಹನಗಳನ್ನು ಅಮಾನತ್ತುಪಡಿಸಿಕೊಳ್ಳುವಾಗ ನಮ್ಮನ್ನು ಸೇರಿಸಿ ಫೋಟೋ ತೆಗೆಯಿರುತ್ತಾರೋ, ಇಲ್ಲವೋ ಎಂದು ನನಗೆ ಗೊತ್ತಿಲ್ಲ. ಮೃತರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮೃತರ ತಂದೆ-ತಾಯಿ ಅಪಘಾತವಾದಾಗ ಸ್ಥಳಕ್ಕೆ ಬಂದಿದ್ದರು.

**<u>ಮರು ವಿಚಾರಣೆ :- ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**